# ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.

## ಸಿ.ಸಿ.ನಂ. 1130/2018

| | | |
|---|---|---|
| ಸಾಕ್ಷಿದಾರರ ಹೆಸರು | : | ಡಾ. ಚಿದಾನಂದ ಹೆಚ್ ಎನ್ |
| ತಂದೆಯ ಹೆಸರು | : | ನಾಗರಾಜು |
| ವಯಸ್ಸು | : | 43 ವರ್ಷ |
| ಉದ್ಯೋಗ | : | ಕಿವಿ, ಮೂಗು, ಗಂಟಲು ತಜ್ಞರು, ಸಾರ್ವಜನಿಕ ಆಸ್ಪತ್ರೆ, ನಂಜನಗೂಡು |
| ವಾಸಸ್ಥಳ | : | ನಂಜನಗೂಡು. |

**ಸಾಕ್ಷಿಯನ್ನು ದಿನಾಂಕಃ 03.10.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸ. ಸ. ಅ. ರವರಿಂದಃ**

ನಾನು 2015 ರಿಂದ ಇಲ್ಲಿಯವರೆಗೆ ನಂಜನಗೂಡು ಸಾರ್ವಜನಿಕ ಆಸ್ಪತ್ರೆಯಲ್ಲಿ ಕಿವಿ, ಮೂಗು, ಗಂಟಲು ತಜ್ಞರಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕ 28.03.2018 ರಂದು ಚಾಸಾ-1 ರವರು ಹಲ್ಲೆಯ ಇತಿಹಾಸದೊಂದಿಗೆ ಚಿಕಿತ್ಸೆಗಾಗಿ ಆಸ್ಪತ್ರೆಗೆ ಬಂದಿದ್ದು, ಅವರನ್ನು ಪರೀಕ್ಷೆ ಮಾಡಿ ನೋಡಲಾಗಿ, ತಲೆಯ ಬಲಭಾಗದಲ್ಲಿ, ಎರಡು ಭುಜ ಮತ್ತು ಎದೆಯ ಭಾಗದಲ್ಲಿ ಹಾಗು ಎರಡೂ ಕಾಲಿನಲ್ಲಿ ನೋವಿರುವುದು ಕಂಡು ಬಂದಿರುತ್ತದೆ. (Pain in right side of the head and pain in chest and shoulders and pain in both the legs). ಈ ಬಗ್ಗೆ ನಾನು ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ. ಸಾಕ್ಷಿಯು ಗಾಯದ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಪಿ-3 ಎಂದು, ಅದರಲ್ಲಿರುವ ಸಾಕ್ಷಿಯ

ಸಹಿಯನ್ನು ನಿ.ಪಿ-3(ಎ) ಎಂದು ಗುರುತಿಸಲಾಯಿತು. ಈ ಮೇಲೆ ಹೇಳಿರುವ ಗಾಯಗಳು ಮುದ್ದೆ ಮಾಲು-1 ಮತ್ತು 2 ರಿಂದ ಹಲ್ಲೆ ಮಾಡಿದರೆ ಆಗುವ ಸಾಧ್ಯತೆ ಇರುತ್ತದೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಸಿ.ಎಲ್.ಬಿ, ವಕೀಲರಿಂದಃ**

ಯಾವುದೇ ಒಬ್ಬ ವ್ಯಕ್ತಿ ದ್ವಿಚಕ್ರ ವಾಹನದಲ್ಲಿ ಹೋಗುತ್ತಿರುವಾಗ ಕೆಳಕ್ಕೆ ಉರುಳಿ ಬಿದ್ದಾಗ ನಿಪಿ–3 ರಲ್ಲಿ ನಮೂದಿಸಿರುವ ಗಾಯವಾಗುವ ಸಾಧ್ಯತೆ ಇರುತ್ತದೆ.

**ಮರು ವಿಚಾರಣೆಃ** ಇರುವುದಿಲ್ಲ.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸಾ ಸ ಇ ಒ.,**

ಸಹಿ/–

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**
**ನಂಜನಗೂಡು.**